**All India Radio: Bangalore**
**Regional Bulletin In Kannada**
**14.12.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**14.12.2025 / 2.30 p.m.**

***************

ಮುಖ್ಯಾಂಶಗಳು :

೧. ೧ ಸಾವಿರ ಕೋಟಿ ರೂಪಾಯಿ ಸೈಬರ್ ವಂಚನೆ ಜಾಲ ಭೇದಿಸಿದ ಸಿಬಿಐ: ಕರ್ನಾಟಕದಲ್ಲೂ ಶೋಧ, ೧೭ ಜನರ ವಿರುದ್ಧ ಆರೋಪ ಪಟ್ಟಿ

೨. ಮತಗಳವು ಆರೋಪಿಸಿ ದೆಹಲಿಯಲ್ಲಿ ಕಾಂಗ್ರೆಸ್ ಪಕ್ಷದಿಂದ ಪ್ರತಿಭಟನೆ; ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಭಾಗಿ

೩. ಇಂದು ಯೋಗಗುರು ಪ್ರೊ. ಬಿ.ಕೆ.ಎಸ್. ಅಯ್ಯಂಗಾರ್ ಜನ್ಮದಿನ; ಗಣ್ಯರಿಂದ ಸ್ಮರಣೆ

೪. ೧೯ ವರ್ಷದೊಳಗಿನವರ ವಿಜಯ ಮರ್ಚಂಟ್ ಟ್ರೋಫಿ ಟೆಸ್ಟ್ ಕ್ರಿಕೆಟ್; ಕೊನೆಯ ದಿನವಾದ ಇಂದು ಗೆಲುವಿಗಾಗಿ ಕರ್ನಾಟಕ-ಉತ್ತರಾಖಂಡ್ ಹಣಾಹಣಿ

*******************

ದೇಶಾದ್ಯಂತ ಸಾವಿರಾರು ಜನರಿಗೆ ವಂಚನೆ ಮಾಡುತ್ತಿದ್ದ ಬೃಹತ್ ಮತ್ತು ವ್ಯವಸ್ಥಿತ ಅಂತಾರಾಷ್ಟ್ರೀಯ ಸೈಬರ್ ವಂಚನೆ ಜಾಲವನ್ನು ಕೇಂದ್ರ ತನಿಖಾ ದಳ - ಸಿಬಿಐ ಭೇದಿಸಿದ್ದು, ನಾಲ್ವರು ವಿದೇಶಿ ಪ್ರಜೆಗಳು ಸೇರಿದಂತೆ ೧೭ ಆರೋಪಿಗಳು ಹಾಗೂ ೫೮ ಕಂಪನಿಗಳ ವಿರುದ್ಧ ಆರೋಪ ಪಟ್ಟಿ ಸಲ್ಲಿಸಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಸಿಬಿಐನ ಈ 'ಆಪರೇಷನ್ ಚಕ್ರ-೫' ಕಾರ್ಯಾಚರಣೆಯ ಭಾಗವಾಗಿ

ಕರ್ನಾಟಕ ಸೇರಿದಂತೆ ೭ ರಾಜ್ಯಗಳಲ್ಲಿ ತೀವ್ರ ಶೋಧ ಕಾರ್ಯ ನಡೆಸಲಾಗಿತ್ತು. ಸಿಬಿಐ ಇಂದು ಬಿಡುಗಡೆ ಮಾಡಿದ ಹೇಳಿಕೆಯ ಪ್ರಕಾರ, ಈ ಸಂಘಟಿತ ಜಾಲವು ನಕಲಿ ಸಾಲ ಅಪ್ಲಿಕೇಶನ್‌ಗಳು, ಸುಳ್ಳು ಹೂಡಿಕೆ ಯೋಜನೆಗಳು, ನಕಲಿ ಅರೆಕಾಲಿಕ ಉದ್ಯೋಗಾವಕಾಶಗಳು ಮತ್ತು ಆನ್‌ಲೈನ್ ಗೇಮಿಂಗ್ ವೇದಿಕೆಗಳ ಮೂಲಕ ಸಾವಿರಾರು ಅಮಾಯಕರನ್ನು ವಂಚಿಸುತ್ತಿತ್ತು. ಈ ಜಾಲವನ್ನು ಭೇದಿಸಲು ಸಿಬಿಐ, ಕರ್ನಾಟಕ, ತಮಿಳುನಾಡು, ಕೇರಳ, ಆಂಧ್ರಪ್ರದೇಶ, ಜಾರ್ಖಂಡ್ ಮತ್ತು ಹರಿಯಾಣ ರಾಜ್ಯಗಳ ೨೭ ಸ್ಥಳಗಳಲ್ಲಿ ಶೋಧ ಕಾರ್ಯ ನಡೆಸಿತ್ತು. ಈ ವಂಚಕರು ಮುಖ್ಯವಾಗಿ ಬೆಂಗಳೂರು ಸೇರಿದಂತೆ ಭಾರತದ ಪ್ರಮುಖ ನಗರಗಳಲ್ಲಿ ೧೧೧ ಶೆಲ್ ಕಂಪನಿಗಳನ್ನು ಸ್ಥಾಪಿಸಿದ್ದರು. ನಕಲಿ ವಿಳಾಸಗಳು ಮತ್ತು ಸುಳ್ಳು ದಾಖಲೆಗಳನ್ನು ಬಳಸಿ ನಕಲಿ ನಿರ್ದೇಶಕರನ್ನು ನೇಮಿಸಿ ಬ್ಯಾಂಕ್ ಖಾತೆಗಳನ್ನು ತೆರೆಯಲಾಗಿತ್ತು. ತನಿಖೆಯ ವೇಳೆ ನೂರಾರು ಬ್ಯಾಂಕ್ ಖಾತೆಗಳನ್ನು ಪರಿಶೀಲಿಸಲಾಗಿದ್ದು, ಈ ಮೂಲಕ ೧ ಸಾವಿರ ಕೋಟಿಗೂ ಹೆಚ್ಚು ಹಣವನ್ನು ವರ್ಗಾಯಿಸಿರುವುದು ಬಯಲಾಗಿದೆ. ಕೇವಲ ಒಂದು ಖಾತೆಯಲ್ಲೇ ಕಡಿಮೆ ಅವಧಿಯಲ್ಲಿ ೧೫೨ ಕೋಟಿಗೂ ಹೆಚ್ಚು ಹಣ ಜಮೆಯಾಗಿತ್ತು. ಸೈಬರ್ ಅಪರಾಧಿಗಳು ವಂಚನೆಗಾಗಿ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸುತ್ತಿದ್ದರು. ಗ್ರಾಹಕರನ್ನು ಆಕರ್ಷಿಸಲು ಗೂಗಲ್ ಜಾಹೀರಾತುಗಳು ಮತ್ತು ಬೃಹತ್ ಎಸ್ ಎಂ ಎಸ್ ಸಂದೇಶಗಳನ್ನು ಬಳಸಲಾಗುತ್ತಿತ್ತು ಎಂದು ವರದಿಯಾಗಿದೆ.

*******************

ಚುನಾವಣಾ ಪ್ರಕ್ರಿಯೆಯಲ್ಲಿ ಮತಗಳವು ನಡೆದಿದೆ ಎಂದು ಆರೋಪಿಸಿ ದೆಹಲಿಯ ರಾಮಲೀಲಾ ಮೈದಾನದಲ್ಲಿ ಕಾಂಗ್ರೆಸ್ ಪಕ್ಷ ಇಂದು ಆಯೋಜಿಸಿರುವ ಬೃಹತ್ ಪ್ರತಿಭಟನಾ ಸಮಾವೇಶದಲ್ಲಿ ಕರ್ನಾಟಕದ ನಾಯಕರು ಭಾಗವಹಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ರಾಜ್ಯದ ಕಾಂಗ್ರೆಸ್ ಶಾಸಕರು ಮತ್ತು ೧ ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಈ ಪ್ರತಿಭಟನೆಯಲ್ಲಿ ಭಾಗವಹಿಸಲು ದೆಹಲಿಗೆ ಆಗಮಿಸಿದ್ದಾರೆ. ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆಯುತ್ತಿರುವ ಈ ಸಮಾವೇಶದಲ್ಲಿ, ಕೇಂದ್ರ ಸರ್ಕಾರದ ಮತ್ತು ಭಾರತೀಯ ಚುನಾವಣಾ ಆಯೋಗದ ವಿರುದ್ಧ ಚುನಾವಣಾ ಅಕ್ರಮಗಳ ಕುರಿತು ಆರೋಪಗಳನ್ನು ಮಾಡಲಾಗುತ್ತಿದೆ. ಸಮಾವೇಶಕ್ಕೆ ಕರ್ನಾಟಕದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಬೃಹತ್ ಸಂಖ್ಯೆಯಲ್ಲಿ ಶಾಸಕರು ಮತ್ತು ಕಾರ್ಯಕರ್ತರು ಪಾಲ್ಗೊಂಡಿದ್ದಾರೆ.

*******************

ಇಂದು ದೇಶಾದ್ಯಂತ ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನವನ್ನು ಆಚರಿಸಲಾಗುತ್ತಿದೆ. ಇಂಧನದ ಸಂರಕ್ಷಣೆಯ ಮಹತ್ವದ ಕುರಿತು ಅರಿವು ಮೂಡಿಸಲು, ದಕ್ಷ ಮತ್ತು ಸಮರ್ಪಕ ಇಂಧನ ಬಳಕೆಯಲ್ಲಿ ರಾಷ್ಟ್ರದ ಸಾಧನೆಗಳನ್ನು ಪ್ರದರ್ಶಿಸಲು ಈ ದಿನವನ್ನು ೧೯೯೧ರಿಂದ ಇಂಧನ ಸಂರಕ್ಷಣಾ ದಿನವನ್ನಾಗಿ ಆಚರಿಸಿಕೊಂಡು ಬರಲಾಗುತ್ತಿದೆ. ಇಂಧನ ಕ್ಷೇತ್ರದಲ್ಲಿ ರಾಜ್ಯದ ಪ್ರಗತಿಯ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸ್ವಚ್ಛ ಮತ್ತು ಹೆಚ್ಚು ಜವಾಬ್ದಾರಿಯುತ ಇಂಧನ ಭವಿಷ್ಯದತ್ತ ರಾಜ್ಯದ ಸ್ಥಿರ ಪ್ರಗತಿಯ ಕುರಿತು ಹೆಮ್ಮೆ ವ್ಯಕ್ತ ಪಡಿಸಿದ್ದು, ಹಸಿರು ಕರ್ನಾಟಕ ನಿರ್ಮಾಣಕ್ಕೆ ಕೈಜೋಡಿಸುವಂತೆ ನಾಗರಿಕರಲ್ಲಿ ಕರೆ ನೀಡಿದ್ದಾರೆ.

*******************

ಉತ್ತರಕನ್ನಡ ಜಿಲ್ಲಾಡಳಿತದ ವತಿಯಿಂದ ವಿಜಯ ದಿವಸ ಕಾರ್ಯಕ್ರಮವನ್ನು ಇದೇ ೧೬ ರಂದು ಬೆಳಗ್ಗೆ ೧೦ ಗಂಟೆಗೆ ಕಾರವಾರದ ಕಡಲ ತೀರದಲ್ಲಿರುವ ಚಪೆಲ್ ಯುದ್ಧ ನೌಕಾ ವಸ್ತು ಸಂಗ್ರಹಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮಕ್ಕೆ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದು ಯಶಸ್ವಿಗೊಳಿಸಬೇಕೆಂದು ಉತ್ತರಕನ್ನಡ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರು ಕೋರಿದ್ದಾರೆ

*******************

ವಿಶ್ವಾದ್ಯಂತ ಯೋಗದ ಮಹತ್ವವನ್ನು ಪಸರಿಸಿದ ಯೋಗಗುರು ಪ್ರೊ. ಬಿ.ಕೆ.ಎಸ್. ಅಯ್ಯಂಗಾರ್ ಅವರನ್ನು ಅವರ ಜನ್ಮದಿನವಾದ ಇಂದು ಸ್ಮರಿಸಲಾಗುತ್ತಿದೆ. ೧೯೧೮ರಲ್ಲಿ ಕೋಲಾರ ಜಿಲ್ಲೆಯ ಬೆಳ್ಳೂರಿನಲ್ಲಿ ಜನಿಸಿದ ಅವರನ್ನು, ಯೋಗವನ್ನು ತಮ್ಮದೇ ಆದ ವಿಶಿಷ್ಠ ಶೈಲಿಯಲ್ಲಿ ಕಲಿಸುವ ಗುರುವಾಗಿ ಗುರುತಿಸಲಾಗುತ್ತದೆ. ಇವರ ಶೈಲಿಗೆ ಅಯ್ಯಂಗಾರ್ ಯೋಗವೆಂದೇ ಕರೆಯಲಾಗುತ್ತದೆ.ರಾಜ್ಯ, ದೇಶದ ಗಡಿ ಮೀರಿ ವಿಶ್ವಕ್ಕೆ ಯೋಗ ಕಲಿಸಿರುವ ಇವರು ಯೋಗದ ಕುರಿತು ಹಲವು ಪುಸ್ತಕಗಳನ್ನು ಬರೆದಿದ್ದಾರೆ. ಇವರ ಅಮೂಲ್ಯ ಕೊಡುಗೆಗಳಿಗೆ ಭಾರತದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಾದ ಪದ್ಮಶ್ರೀ, ಪದ್ಮಭೂಷಣ ಮತ್ತು ಪದ್ಮವಿಭೂಷಣ ಪ್ರಶಸ್ತಿಗಳೊಂದಿಗೆ ಇವರನ್ನು ಗೌರವಿಸಲಾಗಿದೆ. ಅವರ ಜನ್ಮ ದಿನದ ಸಂದರ್ಭದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಉಪಮುಖ್ಯಮಂತ್ರಿ ಡಿ.ಕೆ.,ಶಿವಕುಮಾರ್ ಸೇರಿದಂತೆ ಅನೇಕ ಗಣ್ಯರು ಗೌರವ ನಮನ ಸಲ್ಲಿಸಿದ್ದಾರೆ.

ಬಿ.ಕೆ.ಎಸ್.ಅಯ್ಯಂಗಾರ್ ಅವರನ್ನು ಸ್ಮರಿಸಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಯೋಗವನ್ನು ವಿಶ್ವದಾದ್ಯಂತ ಜನಪ್ರಿಯಗೊಳಿಸಿದ ಹೆಮ್ಮೆಯ

ಕನ್ನಡಿಗರು, ಹಾಗೂ ’ಆಧುನಿಕ ಯೋಗದ ಪಿತಾಮಹ’ರೆಂದು ಪ್ರಸಿದ್ಧರಾದ, ಪದ್ಮವಿಭೂಷಣ ಪುರಸ್ಕೃತ, ಯೋಗಾಚಾರ್ಯ ಪ್ರೊ. ಬಿ. ಕೆ. ಎಸ್.ಅಯ್ಯಂಗಾರ್ ಅವರ ಜನ್ಮದಿನದಂದು ಗೌರವ ನಮನಗಳು. ಯೋಗಕ್ಕೆ ಜಾಗತಿಕ ಮನ್ನಣೆ ದೊರಕಿಸಿಕೊಡುವಲ್ಲಿ ಈ ಆಧುನಿಕ ಋಷಿಯ ಕೊಡುಗೆ ಅಪಾರ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ದೇಹ, ಮನಸ್ಸು ಮತ್ತು ಆತ್ಮದ ಸಮತೋಲನವೇ ನಿಜವಾದ ಯೋಗ ಎಂದು ಜಗತ್ತಿಗೆ ಬೋಧಿಸಿದ ಬಿ.ಕೆ.ಎಸ್.ಅಯ್ಯಂಗಾರ್ ಅವರು ಶಿಸ್ತು, ಸರಳತೆ, ಸಾಧನೆ ಮತ್ತು ಸಾಧಕನ ಆತ್ಮವಿಶ್ವಾಸ, ಇವೆಲ್ಲವನ್ನು ಯೋಗದ ಮೂಲಕ ಮಾನವ ಜೀವನಕ್ಕೆ ಅಳವಡಿಸಿ, ಭಾರತವನ್ನು ವಿಶ್ವ ಯೋಗದ ರಾಜಧಾನಿಯನ್ನಾಗಿ ಮಾಡಿದ ಮಹಾಪುರುಷರೊಲ್ಲೊಬ್ಬರು ಎಂದು ಎಂ.ಬಿ.ಪಾಟೀಲ್ ಹೇಳಿದ್ದಾರೆ.

*******************

ಕೋಲಾರ ಜಿಲ್ಲೆಯಲ್ಲಿ ನಿನ್ನೆ ನಡೆದ ರಾಷ್ಟ್ರೀಯ ಲೋಕಅದಾಲತ್ ಬೈಠಕ್‌ಗಳಲ್ಲಿ ಹಲವು ಸಿವಿಲ್ ವ್ಯಾಜ್ಯಗಳಿಗೆ ಪರಿಹಾರ ಕಲ್ಪಿಸಿದ್ದು, ಒಟ್ಟು ೭೯ ಸಾವಿರದ ೫೭೯ ಪ್ರಕರಣಗಳು ವಿಲೇವಾರಿಯಾಗಿವೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ವಿಜಯಕುಮಾರ ಎಂ. ಆನಂದಶೆಟ್ಟಿ ತಿಳಿಸಿದ್ದಾರೆ. ನಿನ್ನೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ನಡೆದ ರಾಷ್ಟ್ರೀಯ ಲೋಕಅದಾಲತ್ ನಲ್ಲಿ ದಾಖಲಾಗಿದ್ದ ೧೦ ಸಾವಿರದ ೫೪೩ ಪ್ರಕರಣಗಳ ಪೈಕಿ ೭ ಸಾವಿರದ ೧೭೧ ಪ್ರಕರಣಗಳನ್ನು ವಕೀಲರು ಮತ್ತು ಕಕ್ಷಿದಾರರ ಪರಸ್ಪರ ಸಹಕಾರದೊಂದಿಗೆ ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿ, ಒಟ್ಟು ೨೨ ಕೋಟಿ ರೂಪಾಯಿ ಮೊತ್ತದ ಪ್ರಕರಣಗಳನ್ನು ಬಗೆ ಹರಿಸಲಾಗಿದೆ.

*******************

ಈ ತಿಂಗಳ ೧೨ ರಿಂದ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಕಡ್ಡಾಯಗೊಳಿಸಲಾಗಿದ್ದು, ಎರಡನೇ ದಿನವಾದ ನಿನ್ನೆ ಹೆಲ್ಮೆಟ್ ಧರಿಸದೆ ನಿಯಮ ಉಲ್ಲಂಘಿಸಿದ ೧ ಸಾವಿರದ ೨೦೨ ದ್ವಿಚಕ್ರ ವಾಹನ ಸವಾರರಿಗೆ ಜಿಲ್ಲೆಯಾದ್ಯಂತ ಕಾರ್ಯಾಚರಣೆ ನಡೆಸಿ ಪೊಲೀಸರು ಒಟ್ಟು ೬ ಲಕ್ಷ ರೂಪಾಯಿ ದಂಡ ವಸೂಲಿ ಮಾಡಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ಮಾಹಿತಿ ನೀಡಿದ್ದಾರೆ. ಹೆಲ್ಮೆಟ್ ಧರಿಸದೆ ಬೇಜವಾಬ್ದಾರಿತನ ತೋರುವ ದ್ವಿಚಕ್ರ ವಾಹನ ಸವಾರರ ವಿರುದ್ಧ ಕಾರ್ಯಾಚರಣೆ ಮುಂದುವರೆಯಲಿದೆ. ಸುರಕ್ಷತೆ, ಜೀವ ರಕ್ಷಣೆ ದೃಷ್ಟಿಯಿಂದ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ, ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕೆಂದು ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

*******************

ಛತ್ತೀಸ್‌ಗಢದ ಭಿಲೈನಲ್ಲಿ ನಡೆಯುತ್ತಿರುವ ಕರ್ನಾಟಕ ಮತ್ತು ಉತ್ತರಾಖಂಡ ತಂಡಗಳ ನಡುವಿನ ವಿಜಯ್ ಮರ್ಚಂಟ್ ಟ್ರೋಫಿ ಎಲೈಟ್ - ಪುರುಷರ ೧೬ ವರ್ಷದೊಳಗಿನವರ ಟೆಸ್ಟ್ ಕ್ರಿಕೆಟ್ ಪಂದ್ಯದ ಕೊನೆಯ ದಿನವಾದ ಇಂದು ಕರ್ನಾಟಕ ನೀಡಿರುವ ३३೮ ರನ್‌ಗಳ ಗುರಿಯನ್ನು ಉತ್ತರಾಖಂಡ ಬೆನ್ನಟ್ಟಿದೆ. ಇತ್ತೀಚಿನ ವರದಿ ಬಂದಾಗ ಉತ್ತರಾಖಂಡ ತಂಡ 3 ವಿಕೆಟ್ ನಷ್ಟಕ್ಕೆ 163 ರನ್ ಗಳಿಸಿ ಆಡುತ್ತಿದೆ. ಶಿವಮೊಗ್ಗದ ಕೆ.ಎಸ್.ಸಿ.ಎ. ನವುಲೆ ಕ್ರಿಡಾಂಗಣದಲ್ಲಿ ನಡೆಯುತ್ತಿರುವ ಗುಜರಾತ್ ಮತ್ತು ತಮಿಳುನಾಡು ನಡುವಿನ ಪಂದ್ಯದ ಕೊನೆಯ ದಿನವಾದ ಇಂದು ಗುಜರಾತ್ ತಂಡ ತನ್ನ ಎರಡನೇ ಇನ್ನಿಂಗ್ಸ್ ಅನ್ನು ಮುಂದುವರೆಸಿದೆ. ಮೊದಲ ಇನ್ನಿಂಗ್ಸ್ ನಲ್ಲಿ ಗುಜರಾತ್ ೨೧೫ ರನ್ ಗಳಿಸಿತ್ತು. ಪ್ರತಿಯಾಗಿ ತಮಿಳುನಾಡು ತಂಡ ೮ ವಿಕೆಟ್ ನಷ್ಟಕ್ಕೆ ೪೦೬ ರನ್ ಗಳಿಸಿ ಡಿಕ್ಲೆರ್ ಘೋಷಿಸಿತು.

*******************

ಕಾರವಾರ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಮಕ್ಕಳ ತಜ್ಞ ಡಾ. ವಿಶ್ವನಾಥ ಮಾಚಕನೂರ ಆದ್ಯಕ್ಷತೆಯಲ್ಲಿ ಗರ್ಭಧಾರಣೆ ಪೂರ್ವ ಮತ್ತು ಪ್ರಸವ ಪೂರ್ವ ರೋಗ ನಿರ್ಣಯ ತಂತ್ರಗಳು - ಲಿಂಗ ಆಯ್ಕೆ ನಿಷೇಧ ಕಾಯ್ದೆ. ಪಿ.ಸಿ - ಪಿ.ಎನ್.ಡಿ.ಟಿ ಕಾಯ್ದೆಯ ಜಿಲ್ಲಾ ಸಲಹಾ ಸಮಿತಿ ಸಭೆಯು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿಯಲ್ಲಿ ನಡೆಯಿತು. ಸಭೆಯಲ್ಲಿ, ಜಿಲ್ಲೆಯ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಭೇಟಿ ನೀಡಿ ಪರಿಣಾಮಕಾರಿ ಪರಿಶೀಲನೆ, ಹೊಸ ನೋಂದಣಿ ಮತ್ತು ನವೀಕರಣ ಕುರಿತಂತೆ ಸಲ್ಲಿಕೆಯಾದ ಅರ್ಜಿಗಳನ್ನು ಹಾಗೂ ಬಂದಿರುವ ದೂರಿನ ಕುರಿತು ಚರ್ಚಿಸಿ ಸಲಹೆ ಪಡೆದು ಪಿ.ಸಿ.ಪಿ.ಎನ್.ಡಿ.ಟಿ ಸಕ್ಷಮ ಪ್ರಾಧಿಕಾರಿಗಳ ಅನುಮೋದನೆ ಕೋರಿ ಕಡತವನ್ನು ಮಂಡಿಸಲು ತೀರ್ಮಾನಿಸಲಾಯಿತು.

*******************